**Akashvani : Bangalore**
**National Bulletin In Kannada**
**19.05.2024 / 7.35 am**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**19.05.2024 / 7.35 am**

**<><*<><>*><>**

<u>ಮುಖ್ಯಾಂಶಗಳು</u>

೧. ಐದನೇ ಹಂತದ ಲೋಕಸಭಾ ಚುನಾವಣೆ; ೪೯ ಕ್ಷೇತ್ರಗಳಲ್ಲಿ ನಾಳೆ ಮತದಾನ

೨. ಕೊನೆಯ ಎರಡು ಹಂತದ ಸಾರ್ವತ್ರಿಕ ಚುನಾವಣೆಗೆ ರಾಜಕೀಯ ಮುಖಂಡರಿಂದ ಅಬ್ಬರದ ಪ್ರಚಾರ

೩. ಮುಂದಿನ ಐದು ದಿನಗಳ ಕಾಲ ವಾಯವ್ಯ ಭಾರತದಲ್ಲಿ ತೀವ್ರ ಬಿಸಿಗಾಳಿ ಪರಿಸ್ಥಿತಿ - ಹವಾಮಾನ ಇಲಾಖೆ

೪. ಐಪಿಎಲ್ ಕ್ರಿಕೆಟ್: ಚೆನ್ನೈ ಸೂಪರ್ ಕಿಂಗ್ಸ್ ವಿರುದ್ಧ ರಾಯಲ್ ಚಾಲೆಂಜರ್ಸ್ ಬೆಂಗಳೂರಿಗೆ ೨೭ ರನ್ ಜಯ; ಪ್ಲೇ ಆಫ್‌ಗೆ ಅರ್ಹತೆ

**<><*<><>*><>**

ಐದನೇ ಹಂತದಲ್ಲಿ ಚುನಾವಣೆ ನಡೆಯಲಿರುವ ಲೋಕಸಭಾ ಕ್ಷೇತ್ರಗಳಲ್ಲಿ ಬಹಿರಂಗ ಪ್ರಚಾರಕ್ಕೆ ನಿನ್ನೆ ಸಂಜೆ ತೆರೆ ಬಿದ್ದಿದೆ. ಐದನೇ ಹಂತದಲ್ಲಿ ೮ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳನ್ನೊಳಗೊಂಡ ೪೯ ಲೋಕಸಭಾ ಕ್ಷೇತ್ರಗಳಲ್ಲಿ ನಾಳೆ ಬೆಳಿಗ್ಗೆ ೭ ರಿಂದ ಸಂಜೆ ೬ ರವರೆಗೆ ಮತದಾನ ನಡೆಯಲಿದೆ. ಬಿಹಾರದ ೫ ಕ್ಷೇತ್ರಗಳಲ್ಲಿ, ಜಾರ್ಖಂಡ್ ೩, ಮಹಾರಾಷ್ಟ್ರದ ೧೩, ಒಡಿಶಾದ ೫, ಉತ್ತರಪ್ರದೇಶ ೧೪, ಪಶ್ಚಿಮ ಬಂಗಾಳ ೭, ಜಮ್ಮು ಮತ್ತು ಕಾಶ್ಮೀರ ೧, ಲಡಾಖ್‌ನ ೧ ಕ್ಷೇತ್ರಗಳಲ್ಲಿ ಮತದಾನ ನಡೆಯಲಿದೆ.

**<><*<><>*><>**

ಬಿಜೆಪಿ ಹಿರಿಯ ನಾಯಕ ಮತ್ತು ಪ್ರಧಾನಿ ನರೇಂದ್ರ ಮೋದಿ ಪಶ್ಚಿಮ ಬಂಗಾಳದದಲ್ಲಿಂದು ಚುನಾವಣಾ ಪ್ರಚಾರ ಕೈಗೊಳ್ಳಲಿದ್ದಾರೆ. ಇಂದು ಪುರುಲಿಯಾ ಲೋಕಸಭಾ ಕ್ಷೇತ್ರದಲ್ಲಿ ನಡೆಯುವ ಸಾರ್ವಜನಿಕ ಸಭೆಯಲ್ಲಿ ಅವರು, ಪಕ್ಷದ ಅಭ್ಯರ್ಥಿಪರ ಮತಯಾಚಿಸಲಿದ್ದಾರೆ. ಬಳಿಕ ಬಾಕುರಾ ಜಿಲ್ಲೆಯ ಬಿಷ್ಣುಪುರ್ ಹಾಗೂ ಮೇಧಿನಿಪುರ್ ಲೋಕಸಭಾ ಕ್ಷೇತ್ರದ ಖರಗ್‌ಪುರ್‌ನಲ್ಲಿ ಸಾರ್ವಜನಿಕ ಸಭೆಗಳನ್ನುದ್ದೇಶಿಸಿ ಮಾತನಾಡಲಿದ್ದಾರೆ. ಈಶಾನ್ಯ ದೆಹಲಿಯಲ್ಲಿ ನಿನ್ನೆ ಸಂಜೆ ನಡೆದ ಸಾರ್ವಜನಿಕ

ಸಭೆಯಲ್ಲಿ ಮಾತನಾಡಿದ ಅವರು, ಸ್ವಜನಪಕ್ಷಪಾತದ ಮನಸ್ಥಿತಿ ಸೇರಿದಂತೆ ದೇಶವನ್ನು ದುರ್ಬಲಗೊಳಿಸುವ ಇತರ ಶಕ್ತಿಗಳನ್ನು ತೊಡೆದುಹಾಕಲು ಈ ಸಾರ್ವತ್ರಿಕ ಚುನಾವಣೆ ನಿರ್ಣಾಯಕವಾಗಿದೆ. ಭಾರತೀಯ ರಾಜಕೀಯಕ್ಕೆ ಸ್ಥಿರವಾದ ಸರ್ಕಾರದ ಅಗತ್ಯತೆಯಿದೆ ಎಂದು ಹೇಳಿದರು. ಕಳೆದ ಜಿ-೨೦ ಸಮಾವೇಶದಲ್ಲಿ ದೆಹಲಿ ಪರಿವರ್ತನೆಯನ್ನು ಕಂಡು ಜಾಗತಿಕ ನಾಯಕರು ಬೆರಗಾಗಿದ್ದರು ಎಂದು ಪ್ರಧಾನಿ ತಿಳಿಸಿದರು. ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ನಿನ್ನೆ ನವದೆಹಲಿಯ ರಾಮ್‌ಲೀಲಾ ಮೈದಾನದಲ್ಲಿ ಆಯೋಜಿಸಿದ್ದ ಚುನಾವಣಾ ರ‍್ಯಾಲಿಯಲ್ಲಿ ಪಾಲ್ಗೊಂಡರು. ಈ ವೇಳೆ ಮಾತನಾಡಿದ ಅವರು, ಸಂವಿಧಾನವನ್ನು ರಕ್ಷಿಸುವುದು ಐಎನ್‌ಡಿಐ ಮೈತ್ರಿಕೂಟದ ಮೊದಲ ಗುರಿಯಾಗಿದೆ ಆದರೆ ಆಡಳಿತಾರೂಢ ಪಕ್ಷ, ಸಂವಿಧಾನವನ್ನು ದುರ್ಬಲಗೊಳಿಸುವ ಗುರಿಹೊಂದಿದೆ ಎಂದರು.  ಸಣ್ಣ ಉದ್ಯಮಿಗಳಿಗೆ ಬಿಜೆಪಿ ಸರ್ಕಾರ ಏನೂ ಮಾಡಿಲ್ಲ ಎಂದ ಅವರು, ಚುನಾವಣಾ ಬಾಂಡ್ ಹಾಗೂ ನಿರುದ್ಯೋಗ ಸಮಸ್ಯೆಗೆ ಸಂಬಂಧಿಸಿದಂತೆ ಬಿಜೆಪಿ ವಿರುದ್ಧ ಕಿಡಿಕಾರಿದರು.

<><*<><>*><>

ಪ್ರಧಾನಿ ನರೇಂದ್ರ ಮೋದಿ ಅವರು, ತಮ್ಮ ಚುನಾವಣಾ ಭಾಷಣದ ಮೂಲಕ ಸಮಾಜವನ್ನು ವಿಭಜಿಸಲು ಯತ್ನಿಸುತ್ತಿದ್ದಾರೆ ಎಂದು ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಆಪಾದಿಸಿದ್ದಾರೆ. ಮುಂಬೈನಲ್ಲಿ ನಿನ್ನೆ ಐಎನ್‌ಡಿಐ ಪರ ಸುದ್ದಿಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಅವರು, ಮೋಸ ಹಾಗೂ ಸಂಚಿನ ಆಧಾರದ ಮೇಲೆ ರಾಜ್ಯದಲ್ಲಿ ಮಾಹಾಯುತಿ ಸರ್ಕಾರ ರಚಿಸಲಾಗಿದೆ ಎಂದು ಆರೋಪಿಸಿದರು. ಬಿಜೆಪಿ ಮಹಾರಾಷ್ಟ್ರದಲ್ಲಿ ಪ್ರಮುಖ ರಾಜಕೀಯ ಪಕ್ಷಗಳನ್ನು ಒಡೆದಿದ್ದೇ ಅಲ್ಲದೆ, ಅವುಗಳಿಗೆ ಪಕ್ಷದ ಚಿನ್ಹೆ ದೊರಕದಂತೆ ಮಾಡಿದೆ ಎಂದು ದೂರಿದರು. ಎನ್‌ಸಿಪಿ- ಎಸ್‌ಪಿ ಮುಖ್ಯಸ್ಥ ಶರದ್ ಪವಾರ್ ಅವರು ಮಾತನಾಡಿ, ನಿರುದ್ಯೋಗದಂತಹ ವಿಚಾರಗಳಿಂದ ಜನರ ಲಕ್ಷ್ಯವನ್ನು ಬೇರೆಡೆ ಸೆಳೆಯಲು ಪಾಕಿಸ್ತಾನದ ವಿಚಾರವನ್ನು ಐಎನ್‌ಡಿಐ ಮೈತ್ರಿಕೂಟದೊಂದಿಗೆ ಸೇರಿಸಲಾಗುತ್ತಿದೆ ಎಂದು ದೂರಿದರು. ಸಮಾಜವಾದಿ ಪಕ್ಷದ ಮುಖ್ಯಸ್ಥ ಅಖಿಲೇಶ್ ಯಾದವ್ ಅವರು, ಶ್ರವಸ್ತಿ, ಫೈರೂಖಾಬಾದ್, ಸುಲ್ತಾನ್‌ಪುರ್ ಮತ್ತು ಅಂಬೇಡ್ಕರ್ ನಗರಗಳಲ್ಲಿ ರಾಜಕೀಯ ಸಮಾವೇಶ ಉದ್ದೇಶಿಸಿ ಮಾತನಾಡಿದರು.

<><*<><>*><>

ಮುಂದಿನ ಹಂತಗಳ ಲೋಕಸಭಾ ಚುನಾವಣೆಗಾಗಿ ಉತ್ತರ ಪ್ರದೇಶದಲ್ಲಿಂದು ವಿವಿಧ ರಾಜಕೀಯ ಪಕ್ಷಗಳ ಮುಖಂಡರು ಚುನಾವಣಾ ಪ್ರಚಾರ ಕೈಗೊಳ್ಳಲಿದ್ದಾರೆ. ಬಿಜೆಪಿ ಹಿರಿಯ ನಾಯಕ ಹಾಗೂ ಕೇಂದ್ರ ಗೃಹ ಸಚಿವ ಅಮಿತ್ ಶಾ, ಪ್ರಯಾಗ್ ರಾಜ್ ಮತ್ತು ಜೌನ್‌ಪುರ್ ಜಿಲ್ಲೆಗಳಲ್ಲಿ ಚುನಾವಣಾ ರ‍್ಯಾಲಿಗಳಲ್ಲಿ ಪಾಲ್ಗೊಳ್ಳಲಿದ್ದರೆ, ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್, ಆಝುಮ್ ಘರ್, ಜೌನ್‌ಪುರ್,

ಪ್ರತಾಪ್ ಘರ್ ಮತ್ತು ಪ್ರಯಾಗ್ ಜಿಲ್ಲೆಗಳಲ್ಲಿ ಪ್ರಚಾರ ನಡೆಸಲಿದ್ದಾರೆ. ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ, ಸಮಾಜವಾದಿ ಪಕ್ಷದ ಮುಖ್ಯಸ್ಥ ಅಖಿಲೇಶ್ ಯಾದವ್ ಪ್ರಯಾಗ್ ರಾಜ್ ಜಿಲ್ಲೆಯಲ್ಲಿ ಜಂಟಿಯಾಗಿ ಪ್ರಚಾರ ನಡೆಸಲಿದ್ದಾರೆ. ಬಳಿಕ ಅಖಿಲೇಶ್ ಯಾದವ್ ಫೂಲ್‌ಪುರ್ ಕ್ಷೇತ್ರದಲ್ಲಿ ಪ್ರಚಾರ ನಡೆಸಲಿದ್ದರೆ, ಹಿರಿಯ ಕಾಂಗ್ರೆಸ್ ನಾಯಕ ದಿಗ್ವಿಜಯ್ ಸಿಂಗ್ ಮಹಾರಾಜ್ ಗಂಜ್ ಲೋಕಸಭಾ ಕ್ಷೇತ್ರದಲ್ಲಿ ಮತಯಾಚಿಸಲಿದ್ದಾರೆ.

<><*<><>*><>

ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ, ಹಿಮಾಚಲ ಪ್ರದೇಶದ ಫತೇಹ್‌ಪುರ್ ಹಾಗೂ ಚಾಂಬಾದಲ್ಲಿ ಚುನಾವಣಾ ಪ್ರಚಾರ ಕೈಗೊಂಡರು.  ಈ ವೇಳೆ ಪಕ್ಷದ ಪರ ಮತ ಹಾಕುವಂತೆ ಜನರಲ್ಲಿ ಕೋರಿದ ಅವರು, ಕಳೆದ ಹತ್ತು ವರ್ಷಗಳಲ್ಲಿ ಅಭಿವೃದ್ಧಿ ಮಾನದಂಡಗಳನ್ನು ಹೊಸ ಎತ್ತರಕ್ಕೆ ಕೊಂಡೊಯ್ಯಲಾಗಿದೆ. ಕಾಂಗ್ರೆಸ್ ಸರ್ಕಾರ, ಸ್ವಜನ ಪಕ್ಷಪಾತವನ್ನು ಬೆಂಬಲಿಸುತ್ತಿದ್ದು, ಐಎನ್‌ಡಿಐ ಮಿತ್ರ ಪಕ್ಷಗಳು ತಮ್ಮ ಸ್ವಾರ್ಥಕ್ಕಾಗಿ ಮೈತ್ರಿಕೂಟ ರಚಿಸಿವೆ ಎಂದರು.

<><*<><>*><>

ಲೋಕಸಭೆ ಚುನಾವಣೆಯ ಆರನೇ ಹಂತಕ್ಕಾಗಿ ಎಂಟು ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಿಂದ ಒಟ್ಟು ೮೮೯ ಅಭ್ಯರ್ಥಿಗಳು ಸ್ಪರ್ಧಿಸಲಿದ್ದಾರೆ.ಇವರಲ್ಲಿ ಜಮ್ಮು ಮತ್ತು ಕಾಶ್ಮೀರದ ಅನಂತನಾಗ್-ರಜೌರಿ ಲೋಕಸಭಾ ಕ್ಷೇತ್ರದಲ್ಲಿ ಮುಂದೂಡಲ್ಪಟ್ಟ ಚುನಾವಣೆಗೆ ಸ್ಪರ್ಧಿಸುತ್ತಿರುವ ೨೦ ಅಭ್ಯರ್ಥಿಗಳನ್ನು ಒಳಗೊಂಡಿದ್ದಾರೆ. ಈ ಹಂತದಲ್ಲಿ ಚುನಾವಣೆ ನಡೆಯಲಿರುವ ೫೮ ಕ್ಷೇತ್ರಗಳಿಗೆ ಒಟ್ಟು ೧ ಸಾವಿರದ ೯೭೮ ನಾಮಪತ್ರಗಳು ಸಲ್ಲಿಕೆಯಾಗಿವೆ ಎಂದು ಚುನಾವಣಾ ಆಯೋಗ ಪ್ರಕಟಣೆಯಲ್ಲಿ ತಿಳಿಸಿದೆ. ಈ ಹಂತಕ್ಕೆ ನಾಮಪತ್ರ ಸಲ್ಲಿಸಲು ಮೇ ೬ ಕೊನೆಯ ದಿನವಾಗಿತ್ತು. ಸಲ್ಲಿಕೆಯಾದ ಎಲ್ಲಾ ನಾಮಪತ್ರಗಳ ಪರಿಶೀಲನೆಯ ನಂತರ ೯೦೦ ನಾಮಪತ್ರಗಳು ಕ್ರಮಬದ್ಧವಾಗಿವೆ. ಆರನೇ ಹಂತಕ್ಕೆ, ಉತ್ತರ ಪ್ರದೇಶದ ೧೪ ಲೋಕಸಭಾ ಕ್ಷೇತ್ರಗಳಿಂದ ಗರಿಷ್ಠ ೪೭೦ ನಾಮಪತ್ರಗಳು ಸಲ್ಲಿಕೆಯಾಗಿದ್ದು, ಹರಿಯಾಣದ ೧೦ ಸ್ಥಾನಗಳಿಂದ ೩೭೦ ನಾಮಪತ್ರ ಸಲದಲಿಕೆಯಾಗಿದ್ದವು. ಜಾರ್ಖಂಡ್‌ನ ರಾಂಚಿ ಸಂಸದೀಯ ಕ್ಷೇತ್ರದಿಂದ ಗರಿಷ್ಠ ೭೦ ನಾಮಪತ್ರಗಳನ್ನು ಸ್ವೀಕರಿಸಲಾಗಿದೆ.

<><*<><>*><>

ಆಮ್‌ಆದ್ಮಿ ಪಕ್ಷದ ಸಂಸತ್ ಸದಸ್ಯೆ ಸ್ವಾತಿ ಮಾಲೀವಾಲ್ ಅವರ ಮೇಲಿನ ಹಲ್ಲೆ ಆರೋಪದ ಪ್ರಕರಣಕ್ಕೆ ಸಂಬಂಧಿಸಿದಂತೆ ದೆಹಲಿ ಮುಖ್ಯಮುಂತ್ರಿ ಅರವಿಂದ್ ಕೇಜ್ರಿವಾಲ್ ಅವರ ಆಪ್ತ ಸಹಾಯಕ ಬಿಭವ್ ಕುಮಾರ್ ಅವರನ್ನು ದೆಹಲಿ ಜಿಲ್ಲಾ ನ್ಯಾಯಾಲಯ ಹೆಚ್ಚಿನ ವಿಚಾರಣೆಗೆ ಐದು ದಿನಗಳ ಪೊಲೀಸ್ ಕಸ್ಟಡಿಗೆ ಒಪ್ಪಿಸಿದೆ. ನಿನ್ನೆ ದೆಹಲಿ ಪೊಲೀಸರು ಬಿಭವ್ ಕುಮಾರ್ ಅವರನ್ನು

ತಮ್ಮ ವಶಕ್ಕೆ ತೆಗೆದುಕೊಂಡಿದ್ದರು. ಈ ತಿಂಗಳ ೧೩ ರಂದು ಕೇಜ್ರಿವಾಲ್ ಅವರ ನಿವಾಸದಲ್ಲಿ ಬಿಭವ್ ಕುಮಾರ್ ತಮ್ಮ ಮೇಲೆ ಕಿರುಕುಳ ಹಾಗೂ ದೌರ್ಜನ್ಯ ನಡೆಸಿದರು ಎಂದು ಆಪಾದಿಸಿ ಸ್ವಾತಿ ಮಾಲೀವಾಲ್ ದೂರು ನೀಡಿದ್ದರು. ಘಟನಾ ದಿನದಂದು ಸ್ವಾತಿ ಮಾಲೀವಾಲ್ ಅವರು, ಮುಖ್ಯಮಂತ್ರಿ ನಿವಾಸಕ್ಕೆ ಅಕ್ರಮ ಪ್ರವೇಶ ಮಾಡಿದ್ದರೆಂದು ಬಿಭವ್ ಕುಮಾರ್ ಅವರೂ ಕೂಡ ದೂರು ನೀಡಿದ್ದಾರೆ. ಸ್ವಾತಿ ಮಾಲಿವಾಲ್ ಮೇಲಿನ ಹಲ್ಲೆ ಪ್ರಕರಣ ಬಿಜೆಪಿಯ ಸಂಚಾಗಿದೆ ಎಂದು ಆಮ್‌ಆದ್ಮಿ ಪಕ್ಷ ಆಪಾದಿಸಿದೆ. ಪಕ್ಷದ ಹಿರಿಯ ನಾಯಕಿ, ಸಚಿವೆ ಅತಿಶಿ ಅವರು, ದೆಹಲಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ದೆಹಲಿ ಮಹಿಳಾ ಆಯೋಗದ ಗುತ್ತಿಗೆ ನೌಕರರ ನೇಮಕಾತಿ ಅಕ್ರಮಕ್ಕೆ ಸಂಬಂಧಿಸಿದಂತೆ ಭ್ರಷ್ಟಾಚಾರ ವಿರೋಧಿ ಬ್ಯೂರೋ ಸ್ವಾತಿ ಮಾಲೀವಾಲ್ ವಿರುದ್ಧ ಪ್ರಕರಣ ದಾಖಲಿಸಿದೆ. ಬಿಜೆಪಿ, ಇದನ್ನು ಆಮ್‌ಆದ್ಮಿ ಪಕ್ಷದ ವಿರುದ್ಧ ಸಂಚು ಮಾಡಲು ಬಳಸುತ್ತಿದೆ ಎಂದು ಆರೋಪಿಸಿದರು.

<><*<><>*><>

ಶ್ರೀಲಂಕಾದ ಸೀತಾ ಇಳಿಯಾದಲ್ಲಿರುವ ಸೀತಾಮಾತೆ ಮಂದಿರದಲ್ಲಿ ಇಂದು ಕುಂಭಾಭಿಷೇಕ ನಡೆಯಲಿದ್ದು, ಸಡಗರ ಸಂಭ್ರಮ ನೆಲೆಗೊಂಡಿದೆ. ಅಯೋಧ್ಯೆಯಿಂಧ ರವಾನಿಸಲಾದ ಸರಯು ನದಿಯ ೨೫ ಲೀಟರ್ ಪವಿತ್ರ ಜಲವನ್ನು ಕೊಲಂಬೊದಿಂದ ರಥದ ಮೂಲಕ ಸೀತಾಮಾತೆ ಮಂದಿರಕ್ಕೆ ತರಲಾಗಿದೆ. ತಿರುಮಲ ತಿರುಪತಿ ದೇವಸ್ಥಾನದಿಂದ ೫ ಸಾವಿರ ಲಡ್ಡುಗಳನ್ನು ಕಳುಹಿಸಲಾಗಿದೆ. ಈ ಶುಭ ಸಂದರ್ಭವನ್ನು ವೀಕ್ಷಿಸಲು ಭಾರತ ಹಾಗೂ ನೇಪಾಳ ದೇಶಗಳ ವಿವಿಧ ಭಾಗಗಳಿಂದ ಭಕ್ತಾದಿಗಳು ತೆರಳಿದ್ದಾರೆ. ರಾವಣ, ಸೀತಾಮಾತೆಯನ್ನು ಅಪಹರಿಸಿ ಬಂಧನದಲ್ಲಿಟ್ಟ ಈ ಸ್ಥಳ ಸೀತಾ ಇಳಿಯಾ ಅಥವಾ ಅಶೋಕ ವಾಟಿಕಾ ಎಂದೇ ಪ್ರಸಿದ್ಧಿಯಾಗಿದೆ.

<><*<><>*><>

ಭಾರತದ ಚಿರಾಗ್ ಶೆಟ್ಟಿ ಮತ್ತು ಸಾತ್ವಿಕ್ ಸಾಯಿರಾಜ್ ರಂಕಿರೆಡ್ಡಿ ಜೋಡಿ ಥಾಯ್ಲೆಂಡ್ ಓಪನ್ ಬ್ಯಾಡ್‌ಮಿಂಟನ್ ಟೂರ್ನಿಯ ಪುರುಷರ ಡಬಲ್ಸ್ ಫೈನಲ್ ಪ್ರವೇಶಿಸಿದೆ. ಬ್ಯಾಂಕಾಕ್‌ನಲ್ಲಿ ನಿನ್ನೆ ಮಧ್ಯಾಹ್ನ ನಡೆದ ಸೆಮಿಫೈನಲ್ ಪಂದ್ಯದಲ್ಲಿ ಭಾರತದ ಈ ಜೋಡಿ, ತೈವಾನಿನ ಎಂ.ಸಿ.ಲು ಮತ್ತು ತಾಂಗ್ ಕೈ ವಿಯ್ ಜೋಡಿಯನ್ನು ೨೧-೧೧, ೨೧-೧೨ ನೇರ ಪಂದ್ಯಗಳಿಂದ ಸೋಲಿಸಿತು. ಇಂದು ನಡೆಯಲಿರುವ ಫೈನಲ್ ಪಂದ್ಯದಲ್ಲಿ ಭಾರತದ ಜೋಡಿ, ಚೀನಾದ ಚೆನ್ ಬೊಯಾಂಗ್ ಮತ್ತು ತೈವಾನಿನ ಲಿವ್ ಯಿ ತಂಡವನ್ನು ಎದುರಿಸಲಿದೆ. ಮಹಿಳಾ ಡಬಲ್ಸ್ ವಿಭಾಗದಲ್ಲಿ ನಿನ್ನೆ ನಡೆದ ಸೆಮಿ ಫೈನಲ್ಸ್ ಪಂದ್ಯದಲ್ಲಿ ಭಾರತದ ಅಶ್ವಿನಿ ಪೊನ್ನಪ್ಪ ಮತ್ತು ತನಿಶಾ ಕ್ರಾಸ್ಟೋ ಜೋಡಿ ಆತಿಥೇಯ ಥಾಯ್ಲೆಂಡ್‌ನ ಆರ್.ಪ್ರಜಾಂಗ್‌ಜೈ ಹಾಗೂ ಜೆ. ಕಿಟಿತರಕುಲ್ ಅವರ ವಿರುದ್ಧ ೨೧-೧೨, ೨೨-೨೦ ಅಂಕಗಳಿಂದ ಪರಾಭವಗೊಂಡರು.

<><*<><>*><>

ವಾಯುವ್ಯ ಭಾರತದ ಬಯಲು ಪ್ರದೇಶಗಳಲ್ಲಿ ಮುಂದಿನ ಐದು ದಿನಗಳಲ್ಲಿ  ತೀವ್ರವಾದ ಬಿಸಿಗಾಳಿ ಪರಿಸ್ಥಿತಿ ಮುಂದುವರಿಯುವ ಸಾಧ್ಯತೆಯಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಮುಂದಿನ ಮೂರು ದಿನಗಳಲ್ಲಿ ಪೂರ್ವ ಮತ್ತು ಮಧ್ಯ ಭಾರತದಲ್ಲಿ ಶಾಖದ ಅಲೆಯ ಪರಿಸ್ಥಿತಿ ಕಂಡುಬರುವ ಸಾಧ್ಯತೆಯಿದೆ. ಮುಂದಿನ ನಾಲ್ಕು ದಿನಗಳಲ್ಲಿ ಪೂರ್ವ ಉತ್ತರ ಪ್ರದೇಶದ ಕೆಲವು ಭಾಗಗಳಲ್ಲಿ, ನಾಳೆಯಿಂದ ಎರಡು ದಿನಗಳ ಕಾಲ ಹಾಗೂ ಪಶ್ಚಿಮ ಉತ್ತರ ಪ್ರದೇಶದಲ್ಲಿ ಮತ್ತು ಉತ್ತರಾಖಂಡ, ಗುಜರಾತ್ ಮತ್ತು ಮಧ್ಯಪ್ರದೇಶದ ಕೆಲವು ಪ್ರದೇಶಗಳಲ್ಲಿ ಇದೇ ೨೨ ರವರೆಗೆ ಬಿಸಿಗಾಳಿ ಪರಿಸ್ಥಿತಿ ಇರುವ ಸಾಧ್ಯತೆಯಿದೆ. ಭಾರತೀಯ ಹವಾಮಾನ ಇಲಾಖೆಯ ಮುನ್ಸೂಚನೆಯ ಪ್ರಕಾರ ಪಶ್ಚಿಮ ರಾಜಸ್ಥಾನದ ಹೆಚ್ಚಿನ ಸ್ಥಳಗಳಲ್ಲಿ, ಹರಿಯಾಣ-ಚಂಡೀಗಢ-ದೆಹಲಿ, ಪಂಜಾಬ್, ಪೂರ್ವ ರಾಜಸ್ಥಾನದ ಕೆಲವು ಸ್ಥಳಗಳಲ್ಲಿ ಮತ್ತು ಉತ್ತರ ಪ್ರದೇಶ, ಬಿಹಾರ ಹಾಗೂ ಗುಜರಾತ್‌ನ ಕೆಲವು ಸ್ಥಳಗಳಲ್ಲಿ ಬಿಸಿಗಾಳಿ ಪರಿಸ್ಥಿತಿ ಮುಂದುವರೆಯಲಿದ್ದು, ದಕ್ಷಿಣ ಭಾರತದಲ್ಲಿ ಮುಂದಿನ ಮೂರು ದಿನಗಳಲ್ಲಿ ಭಾರೀ  ಮಳೆಯಾಗುವ ಸಾಧ್ಯತೆಯಿದೆ. ನೈಋತ್ಯ ಮಾನ್ಸೂನ್ ಮುಂದಿನ ೪೮ ಗಂಟೆಗಳಲ್ಲಿ ದಕ್ಷಿಣ ಅಂಡಮಾನ್ ಸಮುದ್ರ, ಆಗ್ನೇಯ ಬಂಗಾಳ ಕೊಲ್ಲಿಯ ಕೆಲವು ಭಾಗಗಳು ಮತ್ತು ನಿಕೋಬಾರ್ ದ್ವೀಪಗಳಿಗೆ ಅಪ್ಪಳಿಸುವ ಸಾಧ್ಯತೆಯಿದೆ ಎಂದು ಇಲಾಖೆ ತಿಳಿಸಿದೆ.

<><*<><>*><>

ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಿನ್ನೆ ರಾತ್ರಿ ನಡೆದ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು, ಚೆನ್ನೈ ಸೂಪರ್ ಕಿಂಗ್ಸ್ ತಂಡದ ವಿರುದ್ಧ ೨೭ ರನ್‌ಗಳಿಂದ ಮಹತ್ವದ ಗೆಲುವು ದಾಖಲಿಸಿದೆ. ಈ ಮೂಲಕ ರಾಯಲ್ ಚಾಲೆಂಜರ್ಸ್ ಬೆಂಗಳೂರು, ಪ್ಲೇ ಆಫ್ ಹಂತಕ್ಕೆ ತನ್ನ ಸ್ಥಾನವನ್ನು ಖಚಿತಪಡಿಸಿಕೊಂಡಿದೆ. ಇಂದು ೨ ಪಂದ್ಯಗಳು ನಡೆಯಲಿದ್ದು, ಮೊದಲ ಪಂದ್ಯದಲ್ಲಿ ಹೈದರಾಬಾದ್ ರಾಜೀವ್ ಗಾಂಧಿ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ಸರ್ ರೈಸರ್ಸ್ ಹೈದರಾಬಾದ್ ಹಾಗೂ ಪಂಜಾಬ್ ಕಿಂಗ್ಸ್ ಸೆಣಸಲಿವೆ. ಪಂದ್ಯ ಮಧ್ಯಾಹ್ನ ೩.೩೦ ಕ್ಕೆ ಆರಂಭವಾಗಲಿದೆ. ಗುವಾಹಟಿಯಲ್ಲಿ ನಡೆಯಲಿರುವ ದಿನದ ಎರಡನೇ ಪಂದ್ಯದಲ್ಲಿ ರಾಜಸ್ಥಾನ್ ರಾಯಲ್ಸ್ ಹಾಗೂ ಕೊಲ್ಕತ್ತಾ ನೈಟ್ ರೈಡರ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭.೩೦ ಕ್ಕೆ ಪ್ರಾರಂಭವಾಗಲಿದೆ.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಅಪರಾಹ್ನ ೧.೧೦ ಕ್ಕೆ <>*><>